1646 (2096) ಶ್ರೀ ಶ್ರೀರಾಮರೆಡ್ಡಿ ಜಿ ವಿ (ಬಾಗೇಪಲ್ಲಿ) – ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಯನ್ನು ಮತ್ತು ಅಧಿಕಾರಿಗಳನ್ನು ಇತರೆ ಇಲಾಖೆಗಳಿಂದ ಎರವಲು ಪಡೆಯುವುದು ಹಾಗೂ ವಾಪಸ್ಸು ಕಳಿಸುವುದರಿಂದ ಅಭಿವೃದ್ಧಿ ಕಾರ್ಯಗಳಿಗೆ ಅಡಚಣೆ ಉಂಟಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಈ ಇಲಾಖೆಯ ಪ್ರತ್ಯೇಕ ನಿರ್ದೇಶನಾಲಯ ರಚಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ,

ಇ) ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

ಅ) ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ

ಆ) ಸರ್ಕಾರದ ಮುಂದೆ ಈ ರೀತಿಯ ಯಾವುದೇ ಪ್ರಸ್ತಾವನೆ ಇರುವುದಿಲ್ಲ

ಇ) ಉದ್ಭವಿಸುವುದಿಲ್ಲ

1647 (2225) ಶ್ರೀ ಡಾ॥ ಸುಧಾಕರ್ ಎಂ ಸಿ (ಚಿಂತಾಮಣಿ) – ಮಾನ್ಯ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ತಾಲ್ಲೂಕಿನ ಕೆಂಚಾರ್ಲಹಳ್ಳಿ ಮತ್ತು ಯಗವಕೋಟೆಯ ಸುತ್ತಮುತ್ತಲು ಹೆಚ್ಚಿನ ಗ್ರಾಮಗಳಿದ್ದರೂ, ಅಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು ಇಲ್ಲದಿರುವುದಕ್ಕೆ ಕಾರಣಗಳೇನು,

ಅ) ಗ್ರಾಮೀಣ ಪ್ರದೇಶಗಳ ಗ್ರಾಮಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದು ನಿಜವಲ್ಲವೆ,

ಇ) ಹಾಗಿದ್ದಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಬಸವರಾಜ್ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಚಿಂತಾಮಣಿ ತಾಲ್ಲೂಕಿನಲ್ಲಿ ಒಟ್ಟು 13 ಪದವಿ ಪೂರ್ವ ಕಾಲೇಜುಗಳಿದ್ದು, ಅವುಗಳಲ್ಲಿ 05 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು, 08 ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳೂ ಇವೆ ಕೆಂಚಾರ್ಲಹಳ್ಳಿ ಮತ್ತು ಯಗವಕೋಟೆಯ ಸುತ್ತಮುತ್ತಲಿನ ಗ್ರಾಮಗಳಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡುವ ಬಗ್ಗೆ ಯಾವುದೇ ಪ್ರಸ್ತಾವನೆಗಳು ಬಂದಿರುವುದಿಲ್ಲ

ಆ) ನಿಜ

ಇ) ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆಗಳನ್ನು ಹತ್ತಿರದ ಪ್ರೌಢಶಾಲೆಗಳಿಂದ ಎಸ್ ಎಸ್ ಎಲ್ ಸಿ ಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಸಂಖ್ಯೆ, ಕಟ್ಟಡ ಹಾಗೂ ಇತರ ಮೂಲಭೂತ ಸೌಲಭ್ಯ, ಶೈಕ್ಷಣಿಕ ಅಗತ್ಯತೆ, ವಾರ್ಷಿಕ ಅನುದಾನದಲ್ಲಿನ ಹಣಕಾಸಿನ ಲಭ್ಯತೆಗಳನ್ನು ಆಧರಿಸಿ, ಹಂತ ಹಂತವಾಗಿ ಮಂಜೂರು ಮಾಡಲಾಗುತ್ತಿದೆ

1648 (2226) ಶ್ರೀ ಡಾ॥ ಸುಧಾಕರ್ ಎಂ ಸಿ (ಚಿಂತಾಮಣಿ) – ಮಾನ್ಯ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಂತಾಮಣಿ ಕ್ಷೇತ್ರಕ್ಕೆ ಸೇರಿದ ಚೇಳೂರು ಗ್ರಾಮವು ಆಂದ್ರಪ್ರದೇಶದ ಗಡಿ ಭಾಗದಲ್ಲಿರುವುದಲ್ಲದೆ ಪಟ್ಟಣಗಳಿಗೆ ಸುಮಾರು 35 ಕಿ ಮೀ ದೂರದಲ್ಲಿರುವುದರಿಂದ ಈ ಗ್ರಾಮಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದು ನಿಜವಲ್ಲವೆ,